ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿರುವ ಅನುದಾನಿತ ಶಾಲಾ/ಕಾಲೇಜುಗಳಲ್ಲಿ ಹುದ್ದೆ ಭರ್ತಿ ಮಾಡಲು ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವ / ಸಡಿಲಗೊಳಿಸುವ ಕುರಿತು

ಶ್ರೀ ಅರುಣ ಶಹಾಪೂರ(ಶಿಕ್ಷಕರ ಕ್ಷೇತ್ರ) –

425 (611) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಅನುದಾನಿತ ಪ್ರಾಥಮಿಕ / ಪ್ರೌಢ/ಪದವಿಪೂರ್ವ /ಪದವಿ ಕಾಲೇಜುಗಳ ಸಿಬ್ಬಂದಿ ವರ್ಗಗಳ ಅನುದಾನಕ್ಕೆ ಒಳಪಡಿಸುವ ಪ್ರಕ್ರಿಯೆಗೆ ಆರ್ಥಿಕ ಮಿತವ್ಯಯ ಹೇರಲಾಗಿದೆಯೇ;

(ಆ) ಸದರಿ ಅನುದಾನಿತ ಕಾಲೇಜುಗಳಲ್ಲಿ ಮಂಜೂರಾದ ಖಾಲಿ ಹುದ್ದೆಗಳ ಭರ್ತಿಗೆ ಸಂದರ್ಶನ ನಡೆದು ಇಲಾಖೆಯ ವಿವಿಧ ಹಂತಗಳಲ್ಲಿ ಪ್ರಕ್ರಿಯೆಯಲ್ಲಿರುವ ಹುದ್ದೆಗಳ ಮಾಹಿತಿ ನೀಡುವುದು;

(ಇ) ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವಲ್ಲಿ ತಕ್ಷಣ ಕ್ರಮ ಕೈಗೊಳ್ಳಲು ಇರುವ ಅಡೆತಡೆಗಳೇನು;

(ಈ) ಯಾವ ಕಾಲ ಮಿತಿಯೊಳಗೆ ಅನುದಾನಕ್ಕೆ ಒಳಪಡಿಸಲು ಕ್ರಮ ಕೈಗೊಳ್ಳಲಾಗುವುದು?